ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149   🖷: 08224-256051   jsscwk@gmail.com   www. jsscwkgl.org

## 72ನೇ ವನ್ಯಜೀವಿ ಸಪ್ತಾಹ ಕಾರ್ಯಕ್ರಮ

ದಿನಾಂಕ 6-10-2026 ರಂದು 72ನೇ ವನ್ಯಜೀವಿ ಸಪ್ತಾಹ ಕಾರ್ಯಕ್ರಮವನ್ನು ಕೊಳ್ಳೇಗಾಲದ ಮಲೈ ಮಹದೇಶ್ವರ ವನ್ಯಜೀವಿ ವಿಭಾಗ ಮತ್ತು ಬಫರ್ ವಲಯ ಹಾಗೂ ಕಾನೂನು ಸೇವೆಗಳ ಸಮಿತಿ ಕೊಳ್ಳೇಗಾಲ ಇವರ ಸಹಯೋಗದೊಂದಿಗೆ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಆಯೋಜಿಸಲಾಗಿತ್ತು.

ಕೊಳ್ಳೇಗಾಲ ಬಫರ್ ವಲಯ ಮತ್ತು ವಲಯ ಅರಣ್ಯಾಧಿಕಾರಿಗಳಾದ ಶ್ರೀ ರವಿಕುಮಾರ್ ಎಂ ಪುರಾಣಿಕಮಠ ಅವರು ಭಾರತದಾದ್ಯಂತ ಅಕ್ಟೋಬರ್ 2 ರಿಂದ ಅಕ್ಟೋಬರ್ 8 ರವರೆಗೆ 72ನೇ ರಾಷ್ಟ್ರೀಯ ವನ್ಯಜೀವಿ ಸಪ್ತಾಹವನ್ನು ಆಚರಿಸಲಾಗುತ್ತಿದೆ. ಭೂಮಿಯ ಮೇಲೆ ಲಕ್ಷಾಂತರ ಜೀವರಾಶಿಗಳದ್ದು ಅದರಲ್ಲಿ ಮನುಷ್ಯನೂ ಒಬ್ಬ. ಈ ಎಲ್ಲಾ ಜೀವಾರಾಶಿಗಳನ್ನು ಉಳಿಸುವ ಮತ್ತು ಪ್ರಕೃತಿಯನ್ನು ರಕ್ಷಿಸುವ ಜವಾಬ್ದಾರಿ ಮನುಷ್ಯನ ಮೇಲಿದೆ ಎಂದು ತಮ್ಮ ಪ್ರಾಸ್ತಾವಿಕ ನುಡಿಗಳ ಮೂಲಕ ತಿಳಿಸಿಕೊಟ್ಟರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕೊಳ್ಳೇಗಾಲದ ಗೌರವಾನ್ವಿತ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಶ್ರೀಮತಿ ಎಂ. ಕಾವ್ಯಶ್ರೀ ರವರು ಗಿಡಮರ, ಪ್ರಾಣಿ ಮತ್ತು ಪಕ್ಷಿಗಳನ್ನು ರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ವನ್ಯಜೀವಿ ಮತ್ತು ಪರಿಸರ ಸಂರಕ್ಷಣೆಯ ಕುರಿತು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕೊಳ್ಳೇಗಾಲದ ಗೌರವನ್ವಿತ ಅಪಾರ ಸಿವಿಲ್ ನ್ಯಾಯಾಧೀಶರಾದ ಶ್ರೀ ಎಂ ರಂಜಿತ್‌ಕುಮಾರ್ ರವರು ನಮ್ಮ ದೇಶವು ಅಪಾರ ಜೀವವೈವಿದ್ಯವನ್ನು ಹೊಂದಿದೆ. ಕರ್ನಾಟಕವೂ ಅನೇಕ ಅಭಾಯಾರಣ್ಯಗಳು, ರಾಷ್ಟ್ರೀಯ ಉದ್ಯಾನಗಳು ಮತ್ತು ಸಂರಕ್ಷಿತ ಅರಣ್ಯ ಪ್ರದೇಶಗಳನ್ನು ಹೊಂದಿದ್ದು, ಹುಲಿ, ಆನೆ, ಚಿರತೆ ಹಾಗೂ ಅಪರೂಪದ ಅನೇಕ ಪಕ್ಷಿ-ಪ್ರಾಣಿ ಪ್ರಭೇದಗಳಿಗೆ ಆಶ್ರಯ ನೀಡಿದೆ. ಈ ನೈಸರ್ಗಿಕ ಸಂಪತ್ತನ್ನು ಮುಂದಿನ ಪೀಳಿಗೆಗೆ ಉಳಿಸಿಕೊಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಹೇಳಿದರು.

ಮತ್ತೋರ್ವ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕೊಳ್ಳೇಗಾಲದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಾದ ಶ್ರೀ ಬಿ ಸತೀಶ್ ರವರು ವನ್ಯಜೀವಿ ಸಪ್ತಾಹವು ಕೇವಲ ಒಂದು ವಾರದ ಆಚರಣೆಗೆ ಸೀಮಿತವಾಗಬಾರದು ವನ್ಯಜೀವಿ ಮತ್ತು ಪರಿಸರ ಸಂರಕ್ಷನೆ ನಮ್ಮೆಲ್ಲರ ಪ್ರತಿದಿನದ ಜೀವನದ ಭಾಗವಾಗಬೇಕು ಎಂದು ತಿಳಿಸಿದರು.

ಕೊಳ್ಳೇಗಾಲದ ವಕೀಲರ ಸಂಘದ ಅಧ್ಯಕ್ಷರಾದ ಶೀ ಎನ್ ಬಸವರಾಜುರವರು ಮಾತನಾಡಿ ಪ್ರಕೃತಿಯನ್ನು ನಾವು ಕೇವಲ ಬಳಸಿಕೊಳ್ಳುವ ಸಂಪನ್ಮೂಲವೆಂದು ನೋಡದೆ, ನಮ್ಮ ಜೀವನದ ಅವಿಭಾಜ್ಯ ಅಂಗವೆಂದು ಪರಿಗಣಿಸಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಪ್ರಾಚಾರ್ಯರಾದ ಡಾ.ಹೆಚ್.ಎಸ್ ಕೊಂಗಳಪ್ಪ ಅವರು ಮಾತನಾಡಿ ಮರಗಳನ್ನು ಬೆಳೆಸಿ ಪರಿಸರವನ್ನು ಹಸಿರಾಗಿಸಬೇಕು. ಅರಣ್ಯ ಮತ್ತು ವನ್ಯವಜೀವಿಗಳನ್ನು ಸಂರಕ್ಷಿಸಬೇಕು. ಕಾಡು ಉಳಿದರೆ ವನ್ಯಜೀವಿ ಉಳಿಯುತ್ತದೆ. ವನ್ಯಜೀವಿ ಉಳಿದರೆ ಪರಿಸರ ಉಳಿಯುತ್ತದೆ. ಪರಿಸರ ಉಳಿದೆ ಮಾನವಕುಲ ಉಳಿಯುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆನ್ನು ವಹಿಸಿದ್ದ ಕೊಳ್ಳೇಗಾಲದ ಮಲೈಮಹದೇಶ್ವರ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಶ್ರೀ ವಿರಾಜ್ ಶ್ರೀಕಾಂತ್ ಹೊಸೂರು ಅವರು ಮಾತನಾಡಿ ಅರಣ್ಯ ನಾಶ, ಬೇಟೆ ಮತ್ತು ಪರಿಸರ ಮಾಲಿನ್ಯದಿಂದ ಅನೇಕ ಪ್ರಾಣಿ-ಪಕ್ಷಿಗಳು ಅಪಾಯಕ್ಕೆ ಒಳಗಾಗಿವೆ. ಆದ್ದರಿಂದ ವನ್ಯಜೀವಿ ಹಾಗೂ ಅವುಗಳ ಅವಾಸಸ್ಥನಗಳನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಿಬ್ಬಂದಿಗಳು ವಿದ್ಯಾರ್ಥಿನಿಯರಿಗೆ ವನ್ಯಜೀವಿ ಸಂರಕ್ಷಣೆಯಲ್ಲಿ ಆಧುನಿಕ ಉಪಕರಣಗಳ ಬಳಕೆ ಕುರಿತು ಪಿಪಿಟಿ ಪ್ರಾತ್ಯಕ್ಷಿಕೆ ಮತ್ತು ಕಿರುಚಿತ್ರವನ್ನು ತೋರಿಸಿದರು.

ಕಾರ್ಯಕ್ರಮದಲ್ಲಿ ಅರಣ್ಯ ಸಂರಕ್ಷಣಾಧಿಕಾರಿಗಳು ಸಿಬ್ಬಂದಿಗಳು, ಅಧ್ಯಾಪಕರು, ಅಧ್ಯಾಪಕೇತರ ವೃಂದದವರು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಚಿತ್ರದಲ್ಲಿ ಕೊಳ್ಳೇಗಾಲದ ಮಲೈಮಹದೇಶ್ವರ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಶ್ರೀ ವಿರಾಜ್ ಶ್ರೀಕಾಂತ್ ಹೊಸೂರು, ಗೌರವನ್ವಿತ ಅಪಾರ ಸಿವಿಲ್ ನ್ಯಾಯಾಧೀಶರಾದ ಶ್ರೀ.ಎಂ.ರಂಜಿತ್‌ಕುಮಾರ್, ಕೊಳ್ಳೇಗಾಲದ ಗೌರವಾನ್ವಿತ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಶ್ರೀಮತಿ ಎಂ. ಕಾವ್ಯಶ್ರೀ, ಕೊಳ್ಳೇಗಾಲ ಬಫರ್ ವಲಯ ಮತ್ತು ವಲಯ ಅರಣ್ಯಾಧಿಕಾರಿಗಳಾದ ಶ್ರೀ ರವಿಕುಮಾರ್ ಎಂ ಪುರಾಣಿಕಮತ, ಪ್ರಾಂಶುಪಾಲರದ ಡಾ.ಹೆಚ್.ಎಸ್. ಕೊಂಗಳಪ್ಪರವರು



